# ಕರ್ನಾಟಕ ವಿಧಾನ ಪರಿಷತ್ತು.

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1413 |
| ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು | ಶ್ರೀ ಡಿ.ಟಿ ಶ್ರೀನಿವಾಸ್ (ಆಗ್ನೇಯ ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 22.08.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಹಿಂದುಳಿದ ವರ್ಗದ ಸಮಾಜದ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ನಿಗಧಿಪಡಿಸಲಾಗಿದೆ; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತಾಲಯದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳಿಗೆ, 2025-26 ನೇ ಸಾಲಿನಲ್ಲಿ ಹಿಂದುಳಿದ ವರ್ಗದ ಸಮಾಜದ ಅಭಿವೃದ್ಧಿಗಾಗಿ ರೂ.3514.08 ಕೋಟಿ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.<br><br>2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ವಿವಿಧ ನಿಗಮಗಳಿಗೆ ಸರ್ಕಾರದಿಂದ ಒದಗಿಸಿದ ಅನುದಾನದ ವಿವರ ಈ ಕೆಳಕಂಡಂತೆ ಇದೆ. |

**(ಕೋಟಿ ರೂ.ಗಳಲ್ಲಿ)**

| ಕ್ರ. ಸಂ. | ನಿಗಮಗಳ ಹೆಸರು | 2025-26ನೇ ಸಾಲಿಗೆ ಒದಗಿಸಿದ ಅನುದಾನ |
|---|---|---|
| 1 | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ | 374.78 |
| 2 | ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ | 48.72 |
| 3 | ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ | 29.28 |
| 4 | ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ | 18.74 |
| 5 | ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮ | 44.97 |
| 6 | ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ | 33.73 |
| 7 | ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ | 18.74 |
| 8 | ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ | 224.87 |
| 9 | ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ | 187.39 |
| 10 | ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ | 224.87 |
| 11 | ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮ | 56.22 |

**ಒಟ್ಟು 1262.31**

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಆ)</td><td>ರಾಜ್ಯದಲ್ಲಿ ಯಾವ ಯಾವ ಸಮಾಜದ ಅಭಿವೃದ್ಧಿಗೆ ವಿದ್ಯಾರ್ಥಿ ನಿಲಯ ಸಮುದಾಯದ ಭವನಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ, ಅದರಲ್ಲಿ ಪ್ರಗತಿಯಲ್ಲಿರುವ ಕಟ್ಟಡಗಳು ಎಷ್ಟು ಹೊಸದಾಗಿ ನೀಡಿರುವ ಅನುದಾನವೆಷ್ಟು;</td><td>ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನ/ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ 2023-24 ಮತ್ತು 2024-25 ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನ ಹಾಗೂ ಸದರಿ ಅನುದಾನದಲ್ಲಿ ಪ್ರಗತಿಯಲ್ಲಿರುವ ಕಟ್ಟಡಗಳಿಗೆ 2ನೇ/3ನೇ ಅಂತಿಮ ಕಂತಾಗಿ ನೀಡಿರುವ ಅನುದಾನ ಹಾಗೂ ಸರ್ಕಾರದಿಂದ ಹೊಸದಾಗಿ ಮಂಜೂರಾಗಿದ್ದ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳಿಗೆ ಮೊದಲನೇ ಕಂತಾಗಿ ಬಿಡುಗಡೆಯಾಗಿರುವ ಅನುದಾನದ ವಿವರಗಳು ಈ ಕೆಳಗಿನಂತಿದೆ. (ರೂ.ಲಕ್ಷಗಳಲ್ಲಿ)
<table>
<tr><th>ವರ್ಷ</th><th>ಬಿಡುಗಡೆ ಮಾಡಿರುವ ಅನುದಾನ</th><th>ಪ್ರಗತಿಯಲ್ಲಿ ರುವ ಕಟ್ಟಡಗಳಿಗೆ 2ನೇ/ಅಂತಿಮ ಕಂತಾಗಿ ಬಿಡುಗಡೆ ಮಾಡಿರುವ ಅನುದಾನ</th><th>ಸರ್ಕಾರದಿಂದ ಮಂಜೂರಾಗಿದ್ದ ಕಟ್ಟಡಗಳಿಗೆ ಮೊದಲನೇ ಕಂತಾಗಿ ಬಿಡುಗಡೆ ಮಾಡಿರುವ ಅನುದಾನ</th></tr>
<tr><td>2023-24</td><td>10030.00</td><td>8316.50</td><td>1713.50</td></tr>
<tr><td>2024-25</td><td>10283.00</td><td>4544.00</td><td>5739.00</td></tr>
</table>
</td></tr>
<tr><td>ಇ)</td><td>ಇದುವರೆಗೂ ಮುಂದುವರೆದ ಕಾಮಗಾರಿಗಳನ್ನು ಪರಿಶೀಲಿಸಲಾಗಿದೆ ಯೇ; ಈ ಕಾಮಗಾರಿಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ?</td><td>ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನ/ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಮಂಜೂರಾದ ಅನುದಾನವನ್ನು, ಸದರಿ ಯೋಜನೆಯಡಿ ಆಯಾ ಆರ್ಥಿಕ ವರ್ಷಗಳಲ್ಲಿ ಒದಗಿಸುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನುಸಾರ ಮಾರ್ಗಸೂಚಿಗಳನ್ವಯ ಕಟ್ಟಡ ಕಾಮಗಾರಿಯ ಪ್ರಗತಿಯ ವಿವಿಧ ಹಂತಗಳಲ್ಲಿ 3 ಕಂತುಗಳಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br><br>ಕಾಮಗಾರಿ ಪ್ರಗತಿಯಲ್ಲಿರುವ ಕಟ್ಟಡಗಳಿಗೆ ಸಂಬಂಧಿಸಿದಂತೆ ಈಗಾಗಲೇ ಮೊದಲನೇ/ಎರಡನೇ ಕಂತಾಗಿ ಬಿಡುಗಡೆಯಾಗಿರುವ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರ ಮತ್ತು ಕಟ್ಟಡ ನಿರ್ಮಾಣದ ಪ್ರಗತಿ ವರದಿ ಸಲ್ಲಿಸಿದ್ದಲ್ಲಿ, ಮಾರ್ಗಸೂಚಿಗಳನ್ವಯ ಪರಿಶೀಲಿಸಿಕೊಂಡು ಸದರಿ ಯೋಜನೆಯಡಿ ಲಭ್ಯವಿರುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನ್ನಾಧರಿಸಿ ಎರಡನೇ/ಮೂರನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ. ಕಾಮಗಾರಿ ಪ್ರಗತಿಯಲ್ಲಿರುವ ಕಟ್ಟಡಗಳಿಗೆ 2ನೇ/ಅಂತಿಮ ಕಂತಾಗಿ 2023-24 ನೇ ಸಾಲಿನಲ್ಲಿ ರೂ.8316.50 ಲಕ್ಷಗಳನ್ನು ಹಾಗೂ 2024-25 ನೇ ಸಾಲಿನಲ್ಲಿ ರೂ.4544.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.</td></tr>
</table>

ಸಂಖ್ಯೆ:ಹಿಂವಕ 872 ಬಿಎಂಎಸ್ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು